**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ,**
**ಹಿರಿಯೂರು.**

**ಸಿ.ಸಿ ಸಂಖ್ಯೆಃ 1380/2022**

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಜೆ. ರೆಹಮತ್ ಉಲ್ಲಾ | ಸಿಡಬ್ಲ್ಯೂ-18 |
| ತಂದೆಯ/ಗಂಡನ ಹೆಸರು | – | ಕೆ. ಜೆಯಾವುಲ್ಲಾ | ಪಿಡಬ್ಲ್ಯೂ-9 |
| ವಯಸ್ಸು | – | ಸು. 47 ವರ್ಷ | ಪ್ರ.ವ.ಬೋ<br>ದಿನಾಂಕಃ19.11.2025 |
| ಉದ್ಯೋಗ | – | ಮುಖ್ಯ ಪೇದೆ, ತುರುವನೂರು ಪೊಲೀಸ್ ಠಾಣೆ. | |
| ವಾಸ | – | ಚಿತ್ರದುರ್ಗ. | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ–**

1. ನಾನು 2018 ರಿಂದ 2024 ರವರೆಗೆ ಅಬ್ಬಿನಹೊಳೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿನಾಂಕಃ19.05.2022 ರಂದು ನಾನು ಠಾಣಾ ಪ್ರಭಾರದಲ್ಲಿರುವಾಗ ಮಧ್ಯಾಹ್ನ 1.45 ಗಂಟೆಗೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನಿಪಿ-3 ರಂತೆ ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಠಾಣೆಗೆ ಮರಳಿ ಬಂದು ಸದರಿ ದೂರಿನ ಆಧಾರದ ಮೇಲೆ ಪ್ರಕರಣವನ್ನು ಠಾಣಾ ಮೊಕದ್ದಮೆ ಸಂಖ್ಯೆಃ48/2022 ನೇದ್ದರಲ್ಲಿ ದಾಖಲಿಸಿರುತ್ತೇನೆ. ನಿಪಿ-3 ರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-3(ಬಿ)** ಎಂದು ಗುರುತಿಸಲಾಯಿತು. ನಂತರ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಯಕ್ಕೂ ಮತ್ತು ನಮ್ಮ ಇಲಾಖಾ ಮೇಲಾಧಿಕಾರಿಗಳಿಗೂ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಪ್ರಥಮ ವರ್ತಮಾನ ವರದಿಯನ್ನು **ನಿಪಿ-20** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-20(ಎ)** ಎಂದು ಗುರುತಿಸಲಾಯಿತು.

3. ನಂತರ ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ-19 ರವರಿಗೆ ಹಸ್ತಾಂತರಿಸಿರುತ್ತೇನೆ.

**ಪಾಟೀ–ಸವಾಲುಃ 1 ಮತ್ತು 2 ನೇ ಆರೋಪಿತರ ಪರ ಶ್ರೀ ಸಿ.ಎಸ್. ವಕೀಲರಿಂದಃ–**

4. ಚಾಸಾ–1 ರವರು ದೂರನ್ನು ಅವರೇ ಬರೆದುಕೊಂಡು ತಂದಿದ್ದರು. ನಾನು ಹೇಳುವಂತೆ ಚಾಸಾ–1 ರವರು ದಿನಾಂಕಃ19.05.2022 ರಂದು ಪೊಲೀಸ್ ಠಾಣೆಗೆ ಬಂದಿರುವುದಿಲ್ಲ, ನನ್ನ ಸಮಕ್ಷಮ ಯಾವುದೇ ದೂರು ನೀಡಿಲ್ಲ ಎಂದರೆ ಸರಿಯಲ್ಲ. ನಿಪಿ–3 ಮತ್ತು 20 ನ್ನು ನಾನೇ ಸೃಷ್ಠಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಪಿರ್ಯಾದುದಾರರಿಗೆ ಸಹಾಯ ಮಾಡಲು ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ಸಹ ಅವರ ಮೇಲೆ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಸಿ/ಸಿ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.